<u>ದಿನಾಂಕಃ**06-03-2026** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಮಾಡಿಸಲಾಯಿತು.</u>

<u>ಮಧ್ಯಂತರ ಅರ್ಜಿಯ ಆದೇಶದ ಮೇರೆಗೆ ಮುಖ್ಯ ವಿಚಾರಣೆ ಮಾಡಲು ಅನುಮತಿಯನ್ನು ನೀಡಲಾಯಿತು.</u>

<u>ಮುಂದುವರೆದ ಮುಖ್ಯವಿಚಾರಣೆಃ ಅರ್ಜಿದಾರರ ಪರ ಶ್ರೀ ಬಿ ಸಿ ವಿ ಎಸ್ ವಕೀಲರಿಂದಃ</u>

ನಾನು ಈ ದಿನ ಡಾಃ ಸುರೇಂದ್ರ ಶೆಟ್ಟಿ ಇವರು ನೀಡಿದ ವೆಚ್ಚದ ಒಂದು ದಾಖಲೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-8 ಎಂದು, 6 ವೈಧ್ಯಕೀಯ ಬಿಲ್ಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ- 9 ರಿಂದ 14 ಎಂದು, ಆದರ್ಶ ಆಸ್ಪತ್ರೆಯವರು ನೀಡಿದ ಡಿಸ್ಚಾರ್ಜ್ ಸಮ್ಮರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-15 ಎಂದು, ಸ್ಕಾನಿಂದಗ್ ವರದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-16 ಎಂದು, ಸಾರ್ವಜನಿಕ ಆಸ್ಪತ್ರೆ ಶೃಂಗೇರಿ ಇವರು ನೀಡಿದ ಉಲ್ಲೇಖನ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-17 ಎಂದು, ಒಂದು ಹೊರರೋಗಿ ಚೀಟಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-18 ಎಂದು, ಶ್ರೀ ಹರ್ಷ ಡೆಂಟಲ್ ಕ್ಲೀನಿಕ್ ರವರು ನೀಡಿದ ಒಂದು ದಾಖಲೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-19 ಎಂದು, 3 ಔಷಧಿ ಚೀಟಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ- 20 ರಿಂದ 22 ಎಂದು, ನನ್ನ ಆಧಾರ್ ಕಾರ್ಡ್ ಹಾಗೂ ಪ್ಯಾನ್ ಕಾರ್ಡ್ ಹಾಗೂ ನನ್ನ ಬ್ಯಾಂಕ್ ಖಾತೆಯ ಪಾಸ್ ಪುಸ್ತಕದ ನೋಟರಿ ದೃಢಿಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-23 ರಿಂದ 25 ಎಂದು ಗುರುತಿಸಲಾಯಿತು. (ನಿಪಿ- 23 ರಿಂದ 25 ರ ದಾಖಲೆಯನ್ನು ಪರಿಶೀಲಿಸಿ ಪುನಃ ಅರ್ಜಿದಾರರಿಗೆ ಮರಳಿ ನೀಡಲಾಯಿತು).

<u>ಪಾಟೀ ಸವಾಲುಃ **3** ನೇ ಎದುರುದಾರರ ಪರ ಜೆ ಪಿ ಎಲ್ ಪರವಾಗಿ ಶ್ರೀಮತಿ ಎಸ್ ಬಿ ವಕೀಲರಿಂದಃ</u>

ನಾನು ನಿಪಿ- 8 ದಾಖಲೆಯನ್ನು ಡಾಃಸುರೇಂದ್ರ ಶೆಟ್ಟಿ ಇವರ ಮುಳುಂದ ಡೆಂಟಲ್ ಕೇರ್ ಸೆಂಟರನಲ್ಲಿ ಕೊಟ್ಟಿರುತ್ತಾರೆ. ನಾನು ಮೊದಲು ಹಲ್ಲಿಗೆ ಸಂಬಂಧ ಪಟ್ಟಂತೆ ಕೊಪ್ಪ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ನಂತರ ಡಾಃ ಸುರೇಂದ್ರ ಶೆಟ್ಟಿ ಇವರ ಬಳಿ ಶಸ್ತ್ರ ಚಿಕಿತ್ಸೆಗೆ ಹೋಗಿರುತ್ತೇನೆ. ನಾನು ಹೆಚ್ಚಿನ ಪರಿಹಾರ ಪಡೆಯುವ ಸಲುವಾಗಿ ನಿಪಿ-

8 ನ್ನು ಸೃಷ್ಟಿ ಮಾಡಿ ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳ ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು</u> ಃ 2 ನೇ ಎದುರುದಾರರ ಪರ ವಕೀಲರು 3 ನೇ ಎದುರುದಾರರ ಪರ ವಕೀಲರು ಮಾಡಿದ ಪಾಟೀ ಸವಾಲನ್ನು ತಮ್ಮ ಪಾಟೀ ಸವಾಲು ಎಂದು ಅಳವಡಿಸಿಕೊಂಡಿರುತ್ತಾರೆ.

ಮರು ವಿಚಾರಣೆಃ ಇಲ್ಲಃ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಗಿದೆ.)

ಓ ಹೇ ಕೇ ಸ ಇ ಎ ಒ

Sd/-xxx
ಹಿರಿಯ ಸಿವಿಲ್ ನ್ಯಾಯಾಧೀಶರುಃ
**ನ.ರಾ.ಪುರ, ಸಂಚಾರಿ ನ್ಯಾಯಾಲಯ, ಕೊಪ್ಪ.**

ಸಾಕ್ಷಿದಾರರ ಸಹಿಃ